ಕೋಲಾರ ಡಿಸ್ಟ್ರಿಕ್ಟು.

ಇಸ್ತಿಹಾರ್ ನಾಮೆ.

ತಾರೀಖು 21ನೇ ಮೇ 1896.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧ ಪತ್ರಿಕೆ.

1. ಕಂದಾಯದ ಬಾಕಿದಾರರಾದ ನರಸಿಂಗರಾಯನಿಂದ ಬರಬೇಕಾದ ಜಮಿರ್ಾ ಕಂದಾಯದ ಬಾಕಿಗಾಗಿ ಇದರಡಿ ನಮೂದಾಗುವ ಫಾರಫೀಟಾವ ಸ್ಥಿರಸ್ವತ್ತು ಕೋಲಾರ ಡಿಸ್ಟ್ರಿಕ್ಟು ಘೂಲೂರು ತಾಲ್ಲೂಕು ಅಮಲ್ದಾರ್ರ ಕಚೇರಿಲಿ 1896ನೇ ಜೂ೯ 29ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟಿ ಇದೆ.

ಹರಾಜು ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಜಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1895—96ನೇ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಶೀಲ್ ಮೇರಿಗೆ 135—2—0 ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜ್ ಮೊಬಲಗಿನ ಕೇಕಡಾ 25 ರೂಪಾಯಿಯನ್ನು ಡಿಪಾಜಿಟ್ ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜ್ ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯತು ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ ಮೊಬಲಗನ್ನು ಹಾಜರ್ಮಾಡಿದವನು ಕಳ್ದುಕೊಳ್ಳಲೂ ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ, ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ಏಜಂಟ್ ಯಾ ಮುಖ್ತಾರೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನು ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುಖ್ತಾರೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನು ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಅತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವವರ್ಗೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯೂಟಿ ಕಮ್ಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯೂಟಿ ಕಮ್ಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರು, ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮ್ಮಿಷನರವರಿಂದ ಸೈಗ್ ಮೊಹರ್ ಮಾಡಲ್ಪಟ್ಟ ಒಂದು ಹರಾಜು ಸರಟಿಫಿಕೇಟ್ ಅತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಿಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯೂಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಆವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು.

ತಾಲ್ಲೂಕು.	ಹೋಬ್ಳಿ.	ಗ್ರಾಮ.	ಖಾತೇದಾರನ ಹೆಸರು.	ಸ್ವತ್ತಿನ ತಫ್ಸೀಲ್. ಕಟ್ಟಡಗಳು. ಕಟ್ಟಡದ ಹೆಸರು.	ಕಟ್ಟಡಗಳು. ಅಂದಾಜು ಕಿಮ್ಮತ್ತು.	ಜಮೀನು. ನೆಂಬರ್ ಅಥವಾ ಜಮೀನಿನ ಹೆಸರು.	ಜಮೀನು. ಮುಟ್ಟಿಸೀ ತರೀ ಆಥವಾ ಬಾಗಾಯತು.	ಜಮೀನು. ವಿಸ್ತೀರ್ಣ.	ಜಮೀನು. ಆಕಾರ.	ಸರಕಾರಕ್ಕೆ ಸಲ್ಲತಕ್ಕ ಸಕ್ತಿಯ ಜೊತೆಗೆ ಸಲ್ಲತಕ್ಕವಾದ ಬಾಕೀ ಮೊಲಲುಗಳು.
1	2	3	4	5	6	7	8	9	10	11
					ರೂ.ಆ.ಪೈ.			ಎ. ಗು.	ರೂ. ಆ.ಪೈ.	ರೂ. ಆ. ಪೈ.
ತುಮಕೂರು.	ನರಸಾಪುರ.	ಮುತ್ತಕದಹಳ್ಳಿ ಹೋಬಳಿ ಗ್ರಾಮ.	ನರಸಿಂಗರಾವ್.	..	0	ಫೂರಾ ಗ್ರಾಮ	ಖುಷ್ಕೀ ತರೀ ಬಾಗಾಯಿತು ಟೋಟಲ್. ಸಾಲಿಯಾನಾ ಸರ್ಕಾರಕ್ಕೆ ಬರಬೇಕಾದ್ದು	145 71 20 92 1 23 167 86	195 13 7 135 2 0	135 2 0

ಬಿ. ಜಿ. ಕೃಷ್ಣಯ್ಯಂಗಾರ್,
ಡಪ್ಯೂಟಿ ಕಮ್ಮಿಷನರ್.

ತುಮಕೂರು ಡಿಸ್ಟ್ರಿಕ್ಟು.

1896ನೇ ಇಸವಿ ಮೇ ತಾರೀಖು ರಲ್ಲಿ.

ಇದರಿಂದ ಸಮಸ್ತರಿಗೂ ತಿಳಿಯಪಡಿಸುವದೇನಂದರೆ,—ತುಮಕೂರು ಮತ್ತು ಮದ್ದಗಿರಿ ಡಿಪೋದಲ್ಲಿರುವ ಈ ಕೆಳಗೆ ನಮೂದಾಗುವ ಸಾಮಾನುಗಳನ್ನು 1896ನೇ ಇಸವಿ ಜೂ 15ರಲ್ಲಿ ತುಮಕೂರು ಡಿಪೋದಲ್ಲಿಯೂ 19ರಲ್ಲಿ ಮದ್ದಗಿರಿ ಡಿಪೋದಲ್ಲೂ ತುಮಕೂರು ಡಿಸ್ಟ್ರಿಕ್ಟು ಫಾರೆಸ್ಟ ಆಫಿಸರವರಿಂದ ಹರಾಜು ಮಾಡಲ್ಪಡುತ್ತೆ.

ತುಮಕೂರು ಡಿಪೋ.

ತರಹೆ.	ಸಂಖೆ.	ಸಲೆ. ಆಡಿ.	ಅಂಗುಲ.	ಸಪ್ಪನ.	ಪರಾ.
ತ್ಯಾಗ	226	159	5	..	ಹೆಚ್ಚು ಕಡಮೆ.
ಅಳಲೇಕಾಯಿ	32 ಮಣ	...	...	...	ಡಿಟೋ

ಮದ್ದಗಿರಿ ಡಿಪೋ.

ತ್ಯಾಗ	365	320	3	3	ಡಿಟೋ
ಹುಲಿಕೆ	1	..	8	0	

ಹರಾಜು ಮೊಲಲುಗು ಪಾವತಿ ಆದ ತಾರೀಖು ಲಾಗಾಯತು ಇದರ ನಿಗೇವಾನಿ ಹರಾಜುದಾರನ್ನೇ ಹೊಂದಿರುತ್ತೆ.

ಷರತ್ತುಗಳು.—ಹರಾಜು ಖೈದಾದ ಕೂಡ್ಲೆ ಕಾಲುಹಿಸ್ಸೆ ಮೊಲಲುಗು ಕೇವಣಿ ಕರ್ಕ ಹಾಕಲ್ಪಡಬೇಕು. ಬಾಕಿ ಮೊಲಲುಗನ್ನ